ಕರ್ನಾಟಕ ಸರ್ಕಾರ

**ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು-12**

ಸಂಖ್ಯೆ:ಪಪೂಶಿಇ/ಶೈಶಾ/ಪ್ರ.ಪಿ.ದಾ/2021-22 ದಿನಾಂಕ:18-10-2021.

## ಸುತ್ತೋಲೆ

ವಿಷಯ: 2021-22ನೇ ಶೈಕ್ಷಣಿಕ ಸಾಲಿನ ಪ್ರಥಮ ಪಿಯುಸಿ ದಾಖಲಾತಿ ದಿನಾಂಕವನ್ನು ವಿಶೇಷ ದಂಡ ಶುಲ್ಕದೊಂದಿಗೆ ವಿಸ್ತರಿಸುವ ಕುರಿತು.

ಉಲ್ಲೇಖ:
1) ಪಪೂಶಿ/ಶೈಶಾ/ಪ್ರ.ಪಿ.ದಾ/2021-22 ದಿನಾಂಕ: 10/08/2021.
2) ಪಪೂಶಿ/ಶೈಶಾ/ಪ್ರ.ಪಿ.ದಾ/2021-22 ದಿನಾಂಕ:13/08/2021.
3) ಪಪೂಶಿ/ಶೈಶಾ/ಪ್ರ.ಪಿ.ದಾ/2021-22 ದಿನಾಂಕ:31/08/2021.
4) ಚುನಾಯಿತ ಪ್ರತಿನಿಧಿಗಳು, ಪ್ರಾಂಶುಪಾಲರು ಹಾಗೂ ಪೋಷಕರ ಮನವಿ.
5) ಈ ಕಛೇರಿಯ ಸಮ ಪತ್ರ ಸಂಖ್ಯೆ ದಿನಾಂಕ:23-09-2021.

*****

2021-22ನೇ ಶೈಕ್ಷಣಿಕ ಸಾಲಿಗೆ ಪ್ರಥಮ ಪಿಯುಸಿ ದಾಖಲಾತಿಗೆ ಸಂಬಂಧಿಸಿದಂತೆ, ಉಲ್ಲೇಖ-03ರಲ್ಲಿ ದಾಖಲಾತಿ ದಿನಾಂಕವನ್ನು 05/10/2021ರ ವರೆಗೆ ವಿಸ್ತರಿಸಲಾಗಿತ್ತು. ಉಲ್ಲೇಖ-04ರಲ್ಲಿ ಚುನಾಯಿತ ಪ್ರತಿನಿಧಿಗಳು, ಪ್ರಾಂಶುಪಾಲರು ಹಾಗೂ ಪೋಷಕರ ಮನವಿಯ ಮೇರೆಗೆ, ಉಲ್ಲೇಖ 05ರಲ್ಲಿ ಪ್ರಥಮ ಪಿಯುಸಿ ತರಗತಿಗಳಿಗೆ ದಾಖಲಾತಿ ದಿನಾಂಕವನ್ನು ವಿಶೇಷ ದಂಡ ಶುಲ್ಕದೊಂದಿಗೆ ದಿನಾಂಕ:19-10-2021ರವರೆಗೆ ವಿಸ್ತರಿಸಲಾಗಿತ್ತು.

ಮುಂದುವರೆದು, ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಪ್ರಥಮ ಪಿಯುಸಿ ತರಗತಿಗಳಿಗೆ ದಾಖಲಾತಿ ದಿನಾಂಕವನ್ನು ವಿಶೇಷ ದಂಡ ಶುಲ್ಕದೊಂದಿಗೆ ದಿನಾಂಕ:23-10-2021ರವರೆಗೆ ವಿಸ್ತರಿಸಿ ಆದೇಶಿಸಿದೆ.

2021-22ರ ಮಾರ್ಗಸೂಚಿಯಲ್ಲಿ ತಿಳಿಸಿರುವಂತೆ ದಾಖಲಾತಿ ಶುಲ್ಕಗಳನ್ನು ಸಂಗ್ರಹಿಸುವುದು. ಈ ರೀತಿ ಸಂಗ್ರಹಿಸಿದ ಶುಲ್ಕಗಳನ್ನು ಸರ್ಕಾರ/ಇಲಾಖೆಗೆ ದಾಖಲಾತಿ ದಿನಾಂಕ ಮುಗಿದ ಮಾರನೇ ಕಾರ್ಯನಿರತ ದಿನಾಂಕದಂದು (ವಿಶೇಷ ದಂಡ ಶುಲ್ಕ) ಖಜಾನೆಗೆ ಶುಲ್ಕಗಳನ್ನು ಕಡ್ಡಾಯವಾಗಿ ಜಮೆ ಮಾಡುವುದು. ಈ ಸಂಬಂಧ ಪ್ರಾಂಶುಪಾಲರು/ಆಡಳಿತ ಮಂಡಳಿಯವರು ಪೂರ್ಣ ಜವಾಬ್ದಾರರಾಗಿರುತ್ತಾರೆ ಎಂದು ಸೂಚಿಸಿದೆ.

Snehal

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ

ಪ್ರತಿಗಳು:
1. ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರಿಗೆ ಜಿಲ್ಲಾ ಉಪ ನಿರ್ದೇಶಕರ ಮೂಲಕ.
3. ಸಹಾಯಕ ನಿರ್ದೇಶಕರು, ಇ-ಆಡಳಿತ, ಪದವಿ ಪೂರ್ವ ಶಿಕ್ಷಣ ಇಲಾಖೆ ಬೆಂಗಳೂರು, ಇಲಾಖಾ ಅಂತರ್ ಜಾಲದಲ್ಲಿ ಅಳವಡಿಸಲು.
4. ಕಛೇರಿ ಪ್ರತಿ.